**Akashvani : Bangalore**
**Regional Bulletin In Kannada**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**10.02.2026** **18.40 hrs**

*******************

ಮುಖ್ಯಾಂಶಗಳು

- ವಿವಿಧ ಇಲಾಖೆಗಳೊಂದಿಗೆ ಮುಖ್ಯಮಂತ್ರಿ ಬಜೆಟ್ ಪೂರ್ವ ಸಭೆ; ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಲಿಂಗತ್ವ ಅಲ್ಪಸಂಖ್ಯಾತರ ಸಮೀಕ್ಷಾ ವರದಿ ಸಲ್ಲಿಕೆ
- ಅಬಕಾರಿ ಸನ್ನದು ನೀಡುವಲ್ಲಿ ಇಲಾಖೆಯಿಂದ ಹಲವಾರು ಸುಧಾರಣಾ ಕ್ರಮ - ಸಚಿವ ಆರ್.ಬಿ.ತಿಮ್ಮಾಪುರ
- ಬೆಂಗಳೂರಿನಲ್ಲಿಂದು ಕೆಎಸ್‌ಡಿಎಲ್‌ನಿಂದ ಮೈಸೂರು ಸ್ಯಾಂಡಲ್ ಸಾಬೂನಿನ ನವೀಕರಿಸಿದ ಗುರುತು ಅನಾವರಣ
- ಮಲೆ ಮಹದೇಶ್ವರ ಬೆಟ್ಟದಲ್ಲಿ ಶಿವರಾತ್ರಿ ಜಾತ್ರಾ ಮಹೋತ್ಸವಕ್ಕೆ ಸಿದ್ಧತೆ; ಜಿಲ್ಲಾಡಳಿತದಿಂದ ಜಾಗೃತಿ

***************

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಇಂಧನ, ಯೋಜನಾ ಇಲಾಖೆ, ಕಂದಾಯ ಇಲಾಖೆಯ ಸಚಿವರು ಹಾಗೂ ಅಧಿಕಾರಿಗಳೊಂದಿಗೆ ಪ್ರತ್ಯೇಕವಾಗಿ ಬಜೆಟ್ ಪೂರ್ವ ಸಮಾಲೋಚನೆ ನಡೆಸಿದರು.

ಈ ಸಂದರ್ಭದಲ್ಲಿ ಸಚಿವರಾದ ಸುಧಾಕರ್, ಕೃಷ್ಣಬೈರೇಗೌಡ, ಲಕ್ಷ್ಮೀ ಹೆಬ್ಬಾಳ್ಕರ್ ಹಾಗೂ ಆಯಾ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

ಇದೇ ವೇಳೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮತ್ತು ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ ನಡೆಸಿದ ೨೦೨೫-೨೬ನೇ ಸಾಲಿನ ಲಿಂಗತ್ವ ಅಲ್ಪಸಂಖ್ಯಾತರ ಮೂಲಹಂತದ ಸಮೀಕ್ಷೆಯ ವರದಿಯನ್ನು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸಲ್ಲಿಸಿದ್ದಾರೆ.

***************

ಮದ್ಯ ಮಾರಾಟ ಸನ್ನದು ನೀಡುವಲ್ಲಿ ಲಂಚಪಡೆಯಲು ಅಧಿಕಾರಿಗಳು ತಮ್ಮ ಹೆಸರು ದುರಪಯೋಗಪಡಿಸಿಕೊಂಡಿದ್ದಾರೆ ಎಂದು ಅಬಕಾರಿ ಸಚಿವ ಆರ್.ಬಿ.ತಿಮ್ಮಾಪುರ ತಿಳಿಸಿದ್ದಾರೆ.

ವಿಧಾನಸೌಧದಲ್ಲಿಂದು ಇಲಾಖಾ ಪ್ರಗತಿ ಪರಿಶೀಲನಾ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಲ್ಲಾ ಆರೋಪಗಳು ಸುಳ್ಳು ಎಂದು ತಿಳಿಸಿದ್ದಾರೆ.

ಸನ್ನದು ನೀಡುವಲ್ಲಿ ಮತ್ತು ನವೀಕರಣದಲ್ಲಿ ಹಲವಾರು ಸುಧಾರಣಾ ಕ್ರಮಗಳನ್ನು ತರಲಾಗಿದ್ದು, ಇದರಿಂದ ಹಲವರಿಗೆ ತೊಂದರೆಯಾಗಿದೆ. ಹೀಗಾಗಿ ಈ ಆರೋಪ ಮಾಡಲಾಗುತ್ತಿದೆ ಎಂದು ದೂರಿದ್ದಾರೆ.

ರಾಜ್ಯದಲ್ಲಿ ಗೋವಾ ಮದ್ಯ ತಡೆಗಟ್ಟುವ ಬಗ್ಗೆಯೂ ಚರ್ಚೆ ನಡೆಸಲಾಗಿದ್ದು, ಈ ವರ್ಷ ೪೦ ಸಾವಿರ ಕೋಟಿ ರೂಪಾಯಿ ಆದಾಯ ನಿರೀಕ್ಷಿಸಲಾಗಿದೆ ಎಂದು ಹೇಳಿದ್ದಾರೆ.

***************

ಸರ್ಕಾರಿ ಸ್ವಾಮ್ಯದ ಕರ್ನಾಟಕ ಸಾಬೂನು ಮತ್ತು ಮಾರ್ಜಕಗಳ ನಿಯಮಿತ-ಕೆ.ಎಸ್.ಡಿ.ಎಲ್, ತಯಾರಿಸುವ ಉತ್ಪನ್ನಗಳ ಮಾರುಕಟ್ಟೆ ಬಲವರ್ಧನೆಯ ಅಂಗವಾಗಿ ಖ್ಯಾತ ಬಹುಭಾಷ ನಟಿ ತಮನ್ನಾ ಭಾಟಿಯಾ ಅವರನ್ನು ೨ ವರ್ಷಗಳ ಅವಧಿಗೆ ಪ್ರಚಾರ ರಾಯಭಾರಿಯನ್ನಾಗಿ ನೇಮಿಸಿಕೊಳ್ಳಲಾಗಿದೆ.

ಬೆಂಗಳೂರಿನಲ್ಲಿಂದು ನಡೆದ ಸಮಾರಂಭದಲ್ಲಿ ಮೈಸೂರು ಸ್ಯಾಂಡಲ್ ಸೋಪ್‌ನ ನವೀಕರಿಸಿದ ಗುರುತನ್ನು ಅನಾವರಣಗೊಳಿಸಲಾಯಿತು. ಇದೇ ವೇಳೇ, ರಾಯಭಾರಿ ತಮನ್ನಾ ಭಾಟಿಯಾ ಅವರನ್ನು ಪರಿಚಯಿಸಲಾಯಿತು.

ತನ್ನ ಉತ್ಪಾದನಾ ಘಟಕಗಳನ್ನು ಹೆಚ್ಚಿಸಲು ಕರ್ನಾಟಕ ಸಾಬೂನು ಮತ್ತು ಮಾರ್ಜಕಗಳ ನಿಯಮಿತವು ವಿಜಯಪುರ ಮತ್ತು ದಾಬಸ್‌ಪೇಟೆ ಕೈಗಾರಿಕಾ ಪ್ರದೇಶಗಳಲ್ಲಿ ಸದ್ಯದಲ್ಲೇ ಘಟಕಗಳು ಆರಂಭಗೊಳ್ಳಲಿವೆ.

***************

ಕೈಗಾರಿಕೋದ್ಯಮಿ ಸಿ.ಜೆ.ರಾಯ್ ಆತ್ಮಹತ್ಯೆಗೆ ಸಂಬಂಧಿಸಿದಂತೆ ಎಸ್‌ಐಟಿ ಅಧಿಕಾರಿಗಳು ದುಬೈನಲ್ಲೂ ಮಾಹಿತಿ ಸಂಗ್ರಹಿಸುತ್ತಿದ್ದಾರೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆದಾಯ ತೆರಿಗೆ ಅಧಿಕಾರಿಗಳ ವಿಚಾರಣೆಯನ್ನು ವಿಶೇಷ ತನಿಖಾ ತಂಡದ ವಿವೇಚನೆಗೆ ಬಿಡಲಾಗಿದೆ ಎಂದು ಹೇಳಿದ್ದಾರೆ.

ಸಿ.ಜೆ.ರಾಯ್ ಯಾವುದೇ ಆತ್ಮಹತ್ಯೆ ಪತ್ರ ಬರೆದಿಲ್ಲ. ಪೊಲೀಸರು ಅವರ ಡೈರಿ ಮತ್ತು ಇತರ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ ಎಂದು ತಿಳಿಸಿದ್ದಾರೆ.

***************

ಬೇಸಿಗೆಯಲ್ಲಿ ಮೈಸೂರು ಜಿಲ್ಲೆಯಲ್ಲಿ ಕುಡಿಯುವ ನೀರಿನ ಕೊರತೆ ಆಗದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಜಿ ಲಕ್ಷ್ಮೀಕಾಂತ ರೆಡ್ಡಿ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯಲ್ಲಿ ಕೆ ಆರ್ ಎಸ್, ಕಬಿನಿ ಅಣೆಕಟ್ಟುಗಳಲ್ಲಿ ಇರುವ ನೀರಿನ ಲಭ್ಯತೆಯ ಮಾಹಿತಿಯನ್ನು ಪಡೆದ ಅವರು ಜೂನ್ ಅಂತ್ಯದ ವರೆಗೆ ಅಣೆಕಟ್ಟುಗಳಲ್ಲಿ ಇರುವ ನೀರಿನ ಪ್ರಮಾಣ ಸಾಕಾಗಲಿದೆ. ಕಬಿನಿಯಿಂದ ಚಾನೆಲ್ ಮೂಲಕ ನೀರನ್ನು ಕಾಲ ಕಾಲಕ್ಕೆ ಹರಿಸಿ ಕುಡಿಯುವ ನೀರನ್ನು ಪೂರೈಸುವಂತೆ ಕಬಿನಿ ನೀರಾವರಿ ನಿಗಮದ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಚಾಮುಂಡಿ ಬೆಟ್ಟದಲ್ಲಿ ಕಾಡ್ಗಿಚ್ಚು ಸಂಭವಿಸದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ತಿಳಿಸಿದ್ದಾರೆ.

***************

ಚಾಮರಾಜನಗರದ ಮಲೆ ಮಹದೇಶ್ವರ ಬೆಟ್ಟದಲ್ಲಿ ಐದು ದಿನಗಳ ಕಾಲ ನಡೆಯಲಿರುವ ಮಹಾಶಿವರಾತ್ರಿ ಜಾತ್ರಾ ಮಹೋತ್ಸವಕ್ಕೆ ರಾಮನಗರ, ಚನ್ನಪಟ್ಟಣ, ಮಾಗಡಿ, ಬೆಂಗಳೂರು ಭಾಗದಿಂದ ಸಹಸ್ರಾರು ಮಂದಿ ಭಕ್ತರು ಪಾದಯಾತ್ರೆ ಮೂಲಕ ಕಾವೇರಿ ನದಿ ದಾಟಿ ಆಗಮಿಸುತ್ತಿದ್ದಾರೆ.

ಪಾದಯಾತ್ರೆ ಮಾಡುವ ಭಕ್ತರು, ಅಗತ್ಯ ಸುರಕ್ಷತಾ ಕ್ರಮಗಳನ್ನು ಪಾಲನೆ ಮಾಡಬೇಕು ಚಿನ್ನಾಭರಣ ಸೇರಿದಂತೆ ಬೆಲೆಬಾಳುವ ವಸ್ತುಗಳ ಬಗ್ಗೆ ನಿಗಾವಹಿಸಬೇಕು, ಸೇರಿದಂತೆ ಇನ್ನಿತರ ಸುರಕ್ಷತಾ ಕ್ರಮಗಳ ಬಗ್ಗೆ ಜಿಲ್ಲಾಡಳಿತ ಜಾಗೃತಿ ಮೂಡಿಸುತ್ತಿದೆ.

ಇದೇ ೧೩ರ ಬೆಳಿಗ್ಗೆ ೬ ಗಂಟೆಯಿಂದ ಇದೇ ೧೮ರ ಸಂಜೆ ೬ ಗಂಟೆಯವರೆಗೆ ಮಲೆ ಮಹದೇಶ್ವರ ಬೆಟ್ಟಕ್ಕೆ ದ್ವಿಚಕ್ರ, ತ್ರಿಚಕ್ರ ವಾಹನಗಳ ಸಂಚಾರಕ್ಕೆ ನಿರ್ಬಂಧ ವಿಧಿಸಿ ಎಂದು ಜಿಲ್ಲಾಧಿಕಾರಿ ಶ್ರೀರೂಪಾ ಆದೇಶ ನೀಡಿದ್ದಾರೆ.

***************

ಬೆಂಗಳೂರಿನಲ್ಲಿರುವ ಕೇಂದ್ರ ಸರ್ಕಾರದ ಹೋಟೆಲ್ ಮ್ಯಾನೇಜ್‌ಮೆಂಟ್ ಇನ್‌ಸ್ಟಿಟ್ಯೂಟ್ ನ ಸ್ನಾತಕೋತ್ತರ ಪದವಿ ಮತ್ತು ಪದವಿ ಪ್ರಮಾಣಪತ್ರಗಳನ್ನು ಮುಂದಿನ ದಿನಗಳಲ್ಲಿ ಜವಾಹರಲಾಲ್ ನೆಹರು ವಿಶ್ವವಿದ್ಯಾಲಯ ನೀಡಲಿದೆ ಎಂದು ಪ್ರಾಂಶುಪಾಲ ಡಿ.ವೆಂಕಟೇಶನ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಮಾತನಾಡಿದ ಅವರು, ಈ ಹಿಂದೆ ಇಗ್ನೋ ವಿಶ್ವವಿದ್ಯಾಲಯ ಪದವಿ ಪ್ರಮಾಣ ಪತ್ರಗಳನ್ನು ನೀಡುತ್ತಿತ್ತು. ಇನ್ನು ಮುಂದೆ ಜೆಎನ್‌ಯು ಪದವಿ, ಸ್ನಾತಕೋತ್ತರಗಳ ಜೊತೆ ವಿಶೇಷ ಡಿಪ್ಲೊಮಾ ಮತ್ತು ಅಲ್ಪಾವಧಿಯ ಪ್ರಮಾಣ ಪತ್ರ ಕೋರ್ಸ್‌ಗಳನ್ನು ನಡೆಸಲಿದೆ ಎಂದು ಹೇಳಿದ್ದಾರೆ.

ಇದೇ ವೇಳೆ ಮಾತನಾಡಿದ ಹೋಟೆಲ್ ಮ್ಯಾನೇಂಜ್‌ಮೆಂಟ್ ವಿಭಾಗದ ಮುಖ್ಯಸ್ಥರಾದ ಪ್ರಮೋದ್ ನಾಯ್ಕ್, ಐಎಚ್‌ಎಂ ಬೆಂಗಳೂರು ಕನಿಷ್ಠ ಶುಲ್ಕವನ್ನು ವಿಧಿಸುವುದಲ್ಲದೇ ಪ್ರತಿಷ್ಠಿತ ರಾಷ್ಟ್ರೀಯ ಹಾಗೂ ಅಂತಾರಾಷ್ಟ್ರೀಯ ಸಂಸ್ಥೆಗಳಲ್ಲಿ ಉದ್ಯೋಗ ನಿಯೋಜನೆ ಮಾಡಲಿದೆ ಎಂದು ಮಾಹಿತಿ ನೀಡಿದ್ದಾರೆ.

ಧ್ವನಿ: ಪ್ರಮೋದ್ ನಾಯ್ಕ್

***************

ರಾಜ್ಯ ಸರ್ಕಾರ ಜಾರಿಗೊಳಿಸಿರುವ ಪಂಚ ಗ್ಯಾರಂಟಿ ಯೋಜನೆಗಳೊಂದಿಗೆ ಗ್ರಾಮೀಣ ಭಾಗಗಳಲ್ಲಿ ಮೂಲಸೌಕರ್ಯ ವೃದ್ಧಿಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ವಿಶೇಷವಾಗಿ ಗ್ರಾಮೀಣ ರಸ್ತೆ ನಿರ್ಮಾಣಕ್ಕೆ ಆದ್ಯತೆ ನೀಡಲಾಗಿದೆ ಎಂದು ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ತಿಳಿಸಿದ್ದಾರೆ.

ಕ್ಷೇತ್ರದ ಏಳು ಗ್ರಾಮ ಪಂಚಾಯಿತಿಗಳಿಗೆ ಸ್ವಂತ ಕಚೇರಿ ಕಟ್ಟಡ ನಿರ್ಮಾಣಕ್ಕಾಗಿ ಅನುದಾನ ಒದಗಿಸಲಾಗಿದ್ದು, ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದು ಹೇಳಿದ್ದಾರೆ.

***************

ಅಧಿಕಾರಿಗಳು ಕೆರೆ ಒತ್ತುವರಿಯನ್ನು ತೆರವುಗೊಳಿಸಬೇಕು, ತೆರವುಗೊಳಿಸಿದ ಕೆರೆಗಳನ್ನು ಮತ್ತೆ ಒತ್ತುವರಿ ಮಾಡದಂತೆ ಸಂರಕ್ಷಣೆ ಮಾಡಬೇಕು ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದ್ದಾರೆ.

ಮಂಡ್ಯ ಜಿಲ್ಲೆಯಲ್ಲಿ ಕೆರೆಗಳ ಒತ್ತುವರಿ ತೆರವುಗೊಳಿಸುವ ಸಂಬಂಧ ನಡೆದ ಸಭೆಯಲ್ಲಿ ಇದುವರೆಗೆ ಸುಮಾರು ೨೪೫ ಕೆರೆಗಳ ಒತ್ತುವರಿ ತೆರವುಗೊಳಿಸಲಾಗಿದೆ. ೨೦೩ ಕೆರೆಗಳ ತೆರವು ಬಾಕಿ ಉಳಿದಿದ್ದು, ತಕ್ಷಣವೇ ತೆರವುಗೊಳಿಸಿ ವರದಿ ನೀಡುವಂತೆ ಸಂಬಂಧಪಟ್ಟ ಇಲಾಖೆಗಳಿಗೆ ಸೂಚಿಸಿದ್ದಾರೆ.

ತೆರವುಗೊಳಿಸಿದ ಕೆರೆಗಳ ಸುತ್ತ ಕಂದಕ ನಿರ್ಮಿಸಿ, ನಾಮಫಲಕಗಳನ್ನು ಅಳವಡಿಸುವ ಮೂಲಕ ಮರು-ಒತ್ತುವರಿಯಾಗದಂತೆ ನೋಡಿಕೊಳ್ಳಬೇಕು ಎಂದು ನಿರ್ದೇಶನ ನೀಡಿದ್ದಾರೆ.

***************

ಸುರಕ್ಷಿತವಾಗಿ ಬ್ಯಾಂಕಿಂಗ್ ವ್ಯವಹಾರಗಳನ್ನು ನಡೆಸುವ ಬಗ್ಗೆ ಮತ್ತು ಹಣಕಾಸು ಸಾಕ್ಷರತೆ ಹಾಗೂ ಕೆವೈಸಿ ಕುರಿತು ಜಿಲ್ಲೆಯಾದ್ಯಂತ ಹೆಚ್ಚಿನ ಸಂಖ್ಯೆಯ ಸಾರ್ವಜನಿಕ ಜಾಗೃತಿ ಮತ್ತು ಅರಿವು ಕಾರ್ಯಕ್ರಮಗಳನ್ನು ಆಯೋಜಿಸುವಂತೆ ಲೀಡ್ ಬ್ಯಾಂಕ್ ಅಧಿಕಾರಿಗಳಿಗೆ ಉತ್ತರಕನ್ನಡ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ದಿಲೀಷ್ ಶಶಿ ಸೂಚಿಸಿದ್ದಾರೆ.

ಕಾರವಾರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ, ಫೆಬ್ರವರಿ ೯ರಿಂದ ೧೩ ರವರೆಗೆ ನಡೆಯುವ ಹಣಕಾಸು ಸಾಕ್ಷರತಾ ಸಪ್ತಾಹ ಕಾರ್ಯಕ್ರಮದ ಕುರಿತ ಭಿತ್ತಿಪತ್ರಗಳನ್ನು ಬಿಡುಗಡೆ ಮಾಡಿ ಮಾತನಾಡಿದ ಅವರು, ಪದವಿ ಪೂರ್ವ ಮತ್ತು ಪದವಿ

ಕಾಲೇಜುಗಳ ವಿದ್ಯಾರ್ಥಿಗಳಿಗೆ ಮತ್ತು ಸಾರ್ವಜನಿಕರಿಗೆ ಆನ್‌ಲೈನ್ ವಂಚನೆಗಳ ಕುರಿತು ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಬೇಕು ಎಂದು ತಿಳಿಸಿದ್ದಾರೆ.

***************

ಇದೇ ೧೩ ರಿಂದ ಮೂರು ದಿನಗಳ ಕಾಲ ಹಂಪಿ ಉತ್ಸವ ನಡೆಯಲಿದೆ. ಈ ಹಿನ್ನೆಲೆಯಲ್ಲಿ ಶಿಲ್ಪಕಲಾ ಶಿಬಿರ ಮತ್ತು ಚಿತ್ರಕಲಾ ಶಿಬಿರಗಳು ಜರುಗಿದ್ದು,. ಇಂದು ಹೊಸಪೇಟೆಯ ಜಿಲ್ಲಾಧಿಕಾರಿಗಳ ಕಚೇರಿಯಿಂದ ಹಂಪಿಯ ವಿರೂಪಾಕ್ಷೇಶ್ವರ ದೇವಸ್ಥಾನದವರೆಗೆ ಬೈಕ್ ರ್ಯಾಲಿ ಹಮ್ಮಿಕೊಳ್ಳಲಾಗಿತ್ತು.

********ಮುಕ್ತಾಯ*******